ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ
("ವಿ ಟಿ ಯು ಅಧಿನಿಯಮ ೧೯೯೪" ರ ಅಡಿಯಲ್ಲಿ ಕರ್ನಾಟಕ ಸರ್ಕಾರದಿಂದ ಸ್ಥಾಪಿತವಾದ ರಾಜ್ಯ ವಿಶ್ವವಿದ್ಯಾಲಯ)

**Visvesvaraya Technological University**
(State University of Government of Karnataka Established as per the VTU Act, 1994)
"Jnana Sangama" Belagavi-590018, Karnataka, India
ರಾಷ್ಟ್ರೀಯ ಸೇವಾ ಯೋಜನೆ

ಪ್ರೊ. ಬಿ.ಈ. ರಂಗಸ್ವಾಮಿ ಪಿಹೆಚ್.ಡಿ.
ಕುಲಸಚಿವರು

ದೂರವಾಣಿ ಸಂ : 0831-2405468
ಫ್ಯಾಕ್ಸ್ ಸಂ : 0831-2405467

ಸಂ. ವಿತಾವಿ/ಬಿ.ಜಿ.ಎಮ್/ರಾ.ಸೇ.ಯೋ/ಅ.ಭೂ.ಯೋ/19/2024-25/1619 ದಿನಾಂಕ: 27 AUG 2024

**:ಸುತ್ತೋಲೆ:**

**ವಿಷಯ :** ಅಟಲ್ ಭೂಜಲ ಯೋಜನೆಯಡಿ ಅಂತರ್ಜಲ ನಿರ್ವಹಣೆಯ ಬಗ್ಗೆ ಜಾಗೃತಿ ಮೂಡಿಸುವದು ಮತ್ತು ಜಲಶಕ್ತಿ ಅಭಿಯಾನ : Catch the Rain -2024ರ ಅನುಷ್ಠಾನಗೂಳಿಸುವ ಬಗ್ಗೆ.

**ಉಲ್ಲೇಖ:** 1.ಯುಸೇ೯/19/2021/2024-25/139 ದಿನಾಂಕ:23/08/2024
2.ಯುಸೇ೯/19/2021/2024-25/138 ದಿನಾಂಕ:21/08/2024

ಮೇಲಿನ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯಕ್ಕೆ ಅಧೀನಕ್ಕೊಳಪಡುವ ಸಂಬಂದಪಟ್ಟ ಎಲ್ಲಾ ಅಭಿಯಾಂತ್ರಿಕ/ತಾಂತ್ರಿಕ ಮಹಾವಿದ್ಯಾಲಯಗಳ ಎನ್.ಎಸ್.ಎಸ್. ಕಾರ್ಯಕ್ರಮಾಧಿಕಾರಿಗಳಿಗೆ ತಿಳಿಬಯಸುವದೇನೆಂದರೆ, ಕರ್ನಾಟಕ ರಾಜ್ಯದ 1199 ಗ್ರಾಮ ಪಂಚಾಯತಿಗಳಲ್ಲಿ ಅಟಲ್ ಭೂಜಲ ಯೋಜನೆಯನ್ನು ಜಾರಿಗೊಳಿಸಲಾಗಿದ್ದು. ಅಂತರ್ಜಲದ ಅತಿ ಬಳಕೆಯನ್ನು ತಗ್ಗಿಸುವುದು, ಅಂತರ್ಜಲವನ್ನು ಸುಸ್ಥಿರವಾಗಿ ನಿರ್ವಹಣೆ ಮಾಡುವುದು ಹಾಗೂ ಅಂತರ್ಜಲದ ಮಟ್ಟವನ್ನು ಸುಧಾರಿಸಲು ಪೂರಕ ಉಪಕ್ರಮಗಳನ್ನು ಉತ್ತೇಜಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ. ಆದ್ದರಿಂದ, ಮಹಾವಿದ್ಯಾಲಯಗಳು ತಮ್ಮ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಸದರಿ ಯೋಜನೆಯನ್ನು ಜಾರಿಗೊಳಿಸಲಾದ 5 ಗ್ರಾಮ ಪಂಚಾಯತಿಗಳನ್ನು ಗುರುತಿಸಿ ಅಟಲ್ ಭೂಜಲ ಯೋಜನೆಯಡಿ ಅಂತರ್ಜಲ ನಿರ್ವಹಣೆಯ ಬಗ್ಗೆ ಮತ್ತು ಜಲಶಕ್ತಿ ಅಭಿಯಾನ: Catch the Rain-2024ರ ಅನುಷ್ಠಾನಗೂಳಿಸುವ ಕುರಿತು ಜಾಗೃತಿ ಮೂಡಿಸುವದೊಂದಿಗೆ ಅಟಲ್ ಭೂಜಲ ಯೋಜನೆಯ ಅನುಷ್ಠಾನದ ಬಗ್ಗೆ ಅರಿವು ಮೂಡಿಸುವುದು ಅವಶ್ಯಕವಿರುತ್ತದೆ. ತಮ್ಮ ಮಹಾವಿದ್ಯಾಲಯಗಳ Civil and Water and Land Management ವಿಭಾಗದ ವಿದ್ಯಾರ್ಥಿಗಳು ಮತ್ತು ಎನ್.ಎಸ್.ಎಸ್. ಸ್ವಯಂಸೇವಕರು ಅಂತರ್ಜಲ ನಿರ್ವಹಣೆಯ ಬಗ್ಗೆ ಸಮುದಾಯಕ್ಕೆ ಸೂಕ್ತ ಮಾರ್ಗದರ್ಶನ ನೀಡುವಂತೆ ಸೂಚಿಸಲಾಗಿದೆ.

ಮುಂದುವರೆದು, ಸದರಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಹಮ್ಮಿಕೊಂಡು ಯಶಸ್ವಿಗೊಳಿಸಲು ಕೋರಲಾಗಿದೆ ಹಾಗೂ ಕಾರ್ಯಕ್ರಮಗಳ ಸಂಕ್ಷಿಪ್ತ ವರದಿಯನ್ನು (ಛಾಯಾಚಿತ್ರಗಳೊಂದಿಗೆ) ವಿ.ತಾ.ವಿ.ಯ ರಾ.ಸೇ.ಯೋ. ಕೋಶಕ್ಕೆ (e-mail:nss@vtu.ac.in) ಇ–ಮೇಲ್ ಮೂಲಕ ಸಲ್ಲಿಸಲು ಸೂಚಿಸಲಾಗಿದೆ.

**ಹೆಚ್ಚಿನ ಮಾಹಿತಿಗಾಗಿ:** ಶ್ರೀಮತಿ. ಹೇಮ, ಅಟಲ್ ಭೂಜಲ ಯೋಜನೆ, ಇವರ ಮೊ.ಸಂ.9844370462 ಸಂಪರ್ಕಿಸುವುದು.

27/08/24
ಕುಲಸಚಿವರು

ಇವರಿಗೆ,

ಪ್ರಾಂಶುಪಾಲರು/ಸಂಯೋಜನಾಧಿಕಾರಿಗಳು
ವಿ.ತಾ.ವಿ. ಅಧಿನಕ್ಕೊಳಪಡುವ ಸಂಬಂದಪಟ್ಟ
ಎಲ್ಲಾ ಅಭಿಯಾಂತ್ರಿಕ/ತಾಂತ್ರಿಕ ಮಹಾವಿದ್ಯಾಲಯಗಳು.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಕುಲಪತಿಗಳು, ವಿ.ತಾ.ವಿ., ಬೆಳಗಾವಿ ಇವರಿಗೆ ಕುಲಪತಿಗಳ ಕಾರ್ಯದರ್ಶಿಗಳ ಮುಖಾಂತರ.
2. ಪ್ರಾದೇಶಿಕ ನಿರ್ದೇಶಕರು, ವಿತಾವಿಯ ಪ್ರಾದೇಶಿಕ ಕಛೇರಿ ಬೆಳಗಾವಿ, ಕಲಬುರಗಿ, ಮೈಸೂರು ಮತ್ತು ಬೆಂಗಳೂರು.
3. ವಿಶ್ವವಿದ್ಯಾಲಯದ ವಿವಿಧ ವಿಭಾಗಗಳ ಅಧ್ಯಕ್ಷರುಗಳು/ಸಂಯೋಜಕರು ಬೆಳಗಾವಿ.
4. ನಿರ್ದೇಶಕರು, ಸಿ.ಎನ್.ಸಿ ವಿಭಾಗ, ವಿತಾವಿ., ಬೆಳಗಾವಿ, ಇವರಿಗೆ ಸದರಿ ಸುತ್ತೋಲೆಯನ್ನು ವಿ.ತಾ.ವಿ.ಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
5. ಕಛೇರಿ ಕಡತಕ್ಕೆ.